# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | : | 274 + 223 |
| ವಿಧಾನ ಸಭೆಯ ಸದಸ್ಯರ ಹೆಸರು | : | ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | : | 06.03.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

<table>
<tr><th>ಕ್ರ. ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ.</td><td>ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಜಲಾಶಯ ಹಿನ್ನೀರಿನಲ್ಲಿ ಮುಳುಗಡೆಯಾಗುವ 75 ಸಾವಿರ ಎಕರೆ ಭೂಮಿ ಮತ್ತು 20 ಹಳ್ಳಿಗಳ ಕಟ್ಟಡಗಳ ಭೂಸ್ವಾಧೀನ ಪ್ರಕ್ರಿಯೆ ಬಾಕಿ ಉಳಿದಿರುವುದು ನಿಜವೇ;</td><td>
ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಆಲಮಟ್ಟಿ ಜಲಾಶಯದ ಸಂಗ್ರಹಣೆ ಮಟ್ಟ 519.60 ಮೀ. ದಿಂದ 524.256 ಮೀ. ವರೆಗೆ ಎತ್ತರಿಸುವುದರಿಂದ ಜಲಾಶಯದ ಹಿನ್ನೀರಿನಲ್ಲಿ ಭೂಸ್ವಾಧೀನಗೊಳಪಡುವ ಜಮೀನುಗಳ ವಿವರ ಹಾಗೂ ಇದುವರೆವಿಗೂ ಭೂಸ್ವಾಧೀನಕ್ಕೊಳಪಟ್ಟಿರುವ ಜಮೀನುಗಳ ವಿವರಗಳು ಈ ಕೆಳಕಂಡಂತಿವೆ:
<table>
<tr><th>ವಿವರ</th><th>ಭೂಸ್ವಾಧೀನಕ್ಕೆ ಒಳಪಡುವ ಒಟ್ಟು ಕ್ಷೇತ್ರ (ಎಕರೆ)</th><th>ಅವಾರ್ಡ್ ಆಗಿರುವ ಕ್ಷೇತ್ರ (ಎಕರೆ)</th><th>ಬಾಕಿ ಇರುವ ಕ್ಷೇತ್ರ (ಎಕರೆ)</th></tr>
<tr><td>188 ಗ್ರಾಮಗಳಿಗೆ ಸಂಬಂಧಿಸಿದಂತೆ ಮುಳುಗಡೆಯಾಗುವ ಜಮೀನು</td><td>75,563</td><td>2,543</td><td>73,020</td></tr>
<tr><td>20 ಮುಳುಗಡೆ ಗ್ರಾಮಗಳು & ಬಾಗಲಕೋಟೆ ಪಟ್ಟಣ ಪುನರ್ ವಸತಿಗಾಗಿ</td><td>6,467</td><td>3,393</td><td>3,074</td></tr>
<tr><td>ಕಾಲುವೆಗಳ ಜಾಲಗಳ ನಿರ್ಮಾಣಕ್ಕಾಗಿ</td><td>51,837</td><td>22,967</td><td>28,870</td></tr>
<tr><td>ಒಟ್ಟು :</td><td>1,33,867</td><td>28,903</td><td>1,04,964</td></tr>
</table>
20 ಗ್ರಾಮಗಳಲ್ಲಿನ ಭಾದಿತವಾಗಲಿರುವ 23,330 ಕಟ್ಟಡಗಳ ಪೈಕಿ 566 ಕಟ್ಟಡಗಳನ್ನು ಸ್ವಾಧೀನಪಡಿಸಿಕೊಂಡಿದ್ದು, 22,764 ಆಸ್ತಿ/ ಕಟ್ಟಡಗಳನ್ನು ಸ್ವಾಧೀನಪಡಿಸಿಕೊಳ್ಳಬೇಕಾಗಿದೆ.
</td></tr>
<tr><td>ಆ.</td><td>ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ಬಾಧಿತರಾಗುವ ಭೂ ಮಾಲೀಕರು ಬಾಗಲಕೋಟೆ ಜಿಲ್ಲಾಧಿಕಾರಿ ಕಚೇರಿ ಎದುರುಗಡೆ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಆಗ್ರಹಿಸಿ ಅಹೋರಾತ್ರಿ ಸತ್ಯಾಗ್ರಹ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು</td></tr>
</table>

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಇ. | ಸರ್ಕಾರವು ಡಿಸೆಂಬರ್ ತಿಂಗಳಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸಚಿವರು ಯೋಜನಾ ವ್ಯಾಪ್ತಿಯಲ್ಲಿ ಬರುವ ಚುನಾಯಿತ ಪ್ರತಿನಿಧಿಗಳು ಹಾಗೂ ಯೋಜನಾ ವ್ಯಾಪ್ತಿಯ ಭೂಮಾಲೀಕರ ನಿಯೋಗದೊಂದಿಗೆ ಬೆಳಗಾವಿಯಲ್ಲಿ ನಡೆದ ಸಭೆಯಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸುವಂತೆ ತೀರ್ಮಾನಿಸಿದ್ದು, ಸರ್ಕಾರವು ಅಲ್ಲಿಂದ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳೇನು? | ದಿನಾಂಕ:16.12.2024ರಂದು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಹಾಗೂ ಸನ್ಮಾನ್ಯ ಉಪ ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ ಬೆಳಗಾವಿಯಲ್ಲಿ ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣದ ವಿಷಯಗಳ ಕುರಿತು, ಬಾಗಲಕೋಟೆ-ವಿಜಯಪುರ ಜಿಲ್ಲೆಯ ಜನ ಪ್ರತಿನಿಧಿಗಳು ಹಾಗೂ ಯೋಜನೆಯ ಮುಳುಗಡೆ ಸಂತ್ರಸ್ತರೊಂದಿಗೆ ಸಭೆಯನ್ನು ಜರುಗಿಸಲಾಗಿದ್ದು, ಸಭೆಯಲ್ಲಿ ಚರ್ಚಿಸಿದಂತೆ ಪ್ರಮುಖ ಬೇಡಿಕೆಗಳನ್ವಯ, ಕೃಷ್ಣಾ ಮೇಲ್ದಂಡೆ ಹಂತ-3ರ ಭೂಸ್ವಾಧೀನತೆ ಮತ್ತು ಪುನರ್‌ವಸತಿ & ಪುನರ್‌ನಿರ್ಮಾಣಗಳ ಕುರಿತು ಕೈಗೊಂಡ ನಿರ್ಣಯಗಳು, ಒಪ್ಪಂದದ ಐತೀರ್ಪಿ (Consent Award)ನ ಪರಿಷ್ಕರಣೆ ಹಾಗೂ ಯೋಜನೆಯ ಪರಿಷ್ಕೃತ ಅಂದಾಜು ಪ್ರಸ್ತಾವನೆಗಳ ಕುರಿತು ಅಗತ್ಯ ಅನುಮೋದನೆಗಾಗಿ ಸಚಿವ ಸಂಪುಟದ ಮುಂದೆ ಮಂಡಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಜಸಂಇ 08 ಡಬ್ಲ್ಯೂಬಿಎಂ 2025

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು